


# ಕ್ಯಾನ್ಸರ್

## ಆರಿವೇ ಮೊದಲ ಮದ್ದು

ಕ್ಯಾನ್ಸರ್ ಎಂದರೆ ಸಾಮಾನ್ಯವಾಗಿ ಎಲ್ಲರ ಜೀವಭಯ ಆಡರಿ ಹೋಗುತ್ತದೆ. ಕ್ಯಾನ್ಸರ್ ಎಂಬ ಅರ್ಬುದ ರೋಗಕ್ಕೆ ವಿಶೇಷವಾಗಿ ಕರ್ನಾಟಕದಲ್ಲಿ ಬಲಿಯಾಗುವವರು ಬಹುತೇಕ ಬಡವರೇ. ಕ್ಯಾನ್ಸರ್‌ನ ಮೊದಲ ಹಂತದಲ್ಲೇ ಪತ್ತೆ ಹಚ್ಚಿ ಚಿಕಿತ್ಸೆ ಪಡೆದರೆ ಸಂಪೂರ್ಣವಾಗಿ ಗುಣಪಡಿಸಬಹುದು.

■ ಡಾ. ಗುರಲಿಂಗಪ್ಪ ಅಂಕದ

ಕ್ಯಾನ್ಸರ್ ಬಂದರೆ ಇಡೀ ಕುಟುಂಬವೇ ಕುಸಿಯುತ್ತದೆ. ಇದೊಂದು ಮಾರಣಾಂತಿಕ ಕಾಯಿಲೆ; ಒಮ್ಮೆ ಬಂದರೆ ಹೆಚ್ಚು ಕಾಲ ಬದುಕುವುದು ಸಾಧ್ಯವಿಲ್ಲ, ವಿಪರೀತ ತೊಂದರೆಗಳು, ಖರ್ಚುವೆಚ್ಚ ಎಂಬ ನಂಬಿಕೆ ಅನೇಕರಲ್ಲಿದೆ. ಕ್ಯಾನ್ಸರ್ ಅನ್ನು ಆರಂಭದ ಹಂತದಲ್ಲೇ ಕಂಡುಹಿಡಿದರೆ ಸಂಪೂರ್ಣವಾಗಿ ಗುಣಪಡಿಸಲು ಸಾಧ್ಯ.

ಫೆಬ್ರುವರಿ 4 ವಿಶ್ವ ಕ್ಯಾನ್ಸರ್ ದಿನ

ಸದ್ಯ ಭಾರತದಲ್ಲಿ ಮಧುಮೇಹ, ಅಧಿಕ ರಕ್ತದೊತ್ತಡಗಳು ಸಾಮಾನ್ಯವಾಗಿ ಕಂಡುಬರುವ ಸಮಸ್ಯೆಗಳು. ಇವುಗಳ ಸರಣಿಗೆ ಕ್ಯಾನ್ಸರ್‌ನಂತಹ ಕಾಯಿಲೆಗಳು ಸೇರುತ್ತಿರುವುದು ಆತಂಕಕಾರಿ ವಿಷಯ. ಬಹುತೇಕ ಕ್ಯಾನ್ಸರ್‌ಗಳು ಅಂತಿಮ ಹಂತದಲ್ಲೇ ಪತ್ತೆಯಾಗುತ್ತಿರುವುದು ಕೂಡ ಶೋಚನೀಯವೇ. ಅಮೆರಿಕದಂತಹ ಮುಂದುವರಿದ ದೇಶಗಳಲ್ಲಿ ಕ್ಯಾನ್ಸರ್ ಅನ್ನು ಮೊದಲ ಅಥವಾ ಎರಡನೇ ಹಂತದಲ್ಲೇ ಪತ್ತೆ ಹಚ್ಚುವ ವೈದ್ಯಕೀಯ ತಂತ್ರಜ್ಞಾನ ಇದೆ. ಆದರೆ ಭಾರತದಲ್ಲಿ ಶೇ.80 ರಷ್ಟು ರೋಗಿಗಳು 34 ನೇ ಹಂತದಲ್ಲಿದ್ದಾಗ ಪತ್ತೆಯಾಗುತ್ತವೆ. ಈ ಹಂತದಲ್ಲಿ ರೋಗ ಗುಣಮುಖವಾಗುವ ಸಾಧ್ಯತೆ ಕಡಿಮೆ.

ವಿಶ್ವದ ಕ್ಯಾನ್ಸರ್ ಬಾಧಿತ ದೇಶಗಳಲ್ಲಿ ಭಾರತ 5 ನೇ ಸ್ಥಾನ ಪಡೆದಿದೆ. ಭಾರತದಲ್ಲಿ ಪ್ರತಿ ವರ್ಷ 10 ಲಕ್ಷ ಜನರಲ್ಲಿ ಕ್ಯಾನ್ಸರ್ ರೋಗ ಪತ್ತೆಯಾಗುತ್ತದೆ. ಇವರಲ್ಲಿ ಶೇ. 95ರಷ್ಟು ಜನರಲ್ಲಿ ಕಂಡುಬರುವ ಕ್ಯಾನ್ಸರ್ ಗೆ ತಂಬಾಕು ಸೇವನೆಯೇ ಕಾರಣ. ತಂಬಾಕಿನಿಂದ ಮುಖ್ಯವಾಗಿ ಬಾಯಿ, ಗಂಟಲು, ಶ್ವಾಸಕೋಶ, ಅನ್ನನಾಳ, ಕರುಳು, ಮೂತ್ರಪಿಂಡ ಮುಂತಾದ ಅಂಗಗಳು ಕ್ಯಾನ್ಸರ್‌ಗೆ ಒಳಗಾಗುತ್ತವೆ. ಧೂಮಪಾನದಿಂದ ಹೆಚ್ಚಾಗಿ ಶ್ವಾಸಕೋಶದ ಕ್ಯಾನ್ಸರ್ ಬರುತ್ತದೆ.

### ಸ್ತನ ಕ್ಯಾನ್ಸರ್

ಕ್ಯಾನ್ಸರ್ ಪೀಡಿತರಲ್ಲಿ ಸ್ತನ ಕ್ಯಾನ್ಸರ್ ಎರಡನೆಯ ಸ್ಥಾನ ಹೊಂದಿದೆ. ದಾಖಲಾದ ಕ್ಯಾನ್ಸರ್ ರೋಗಿಗಳ ಸಂಖ್ಯೆಯ ಪ್ರಕಾರ ಪ್ರತಿ ಲಕ್ಷ ಜನರಲ್ಲಿ 36 ಜನರು ಸ್ತನ ಕ್ಯಾನ್ಸರ್‌ಗೆ ಗುರಿಯಾದವರಿದ್ದಾರೆ. ಸಾಮಾನ್ಯವಾಗಿ 55 ವರ್ಷ ದಾಟಿದ ಮಹಿಳೆಯುರಲ್ಲಿ ಸ್ತನ ಕ್ಯಾನ್ಸರ್ ಬರುತ್ತದೆ. ಆದರೆ ಇಂದು ಹದಿಹರೆಯದ ಯುವತಿಯರೂ ಸ್ತನ ಕ್ಯಾನ್ಸರ್‌ಗೆ ಒಳಗಾಗುತ್ತಿದ್ದಾರೆ.